# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ : 808

ಸದಸ್ಯರ ಹೆಸರು : ಶ್ರೀ. ಕೆ. ಅಬ್ದುಲ್ ಜಬ್ಬರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 23.07.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತೋಟಗಾರಿಕೆ ಇಲಾಖೆಯಲ್ಲಿ ಬರುವ ಪ್ರಸ್ತುತ ಯೋಜನೆಗಳಾವುವು; ಸದರಿ ಯೋಜನೆಗಳು ಯಾವ ಯಾವ ರೀತಿಯ ಫಲಾನುಭವಿಗಳಿಗೆ ತಲುಪುತ್ತಿವೆ: (ಸಂಪೂರ್ಣ ಮಾಹಿತಿ ಒದಗಿಸುವುದು) | ತೋಟಗಾರಿಕೆ ಇಲಾಖೆಯಲ್ಲಿ ಬರುವ ಪ್ರಸ್ತುತ ಫಲಾನುಭವಿ ಆಧಾರಿತ ಯೋಜನೆಗಳು ಈ ಕೆಳಕಂಡಂತಿವೆ:<br>1. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ<br>2. ರಾಷ್ಟ್ರೀಯ ತೋಟಗಾರಿಕೆ ಮಿಷನ್<br>3. ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ - ತಾಳೆ ಎಣ್ಣೆ<br>4. ಪರಂಪರಾಗತ ಕೃಷಿ ವಿಕಾಸ ಯೋಜನೆ<br>5. ಉತ್ಪಾದನಾ ಸುಧಾರಣಾ ಕಾರ್ಯ ಯೋಜನೆಗೆ ತೆಂಗಿನಲ್ಲಿ ಸಂಯೋಜಿತ ಬೇಸಾಯ<br>6. ಕೃಷಿ ಯಾಂತ್ರೀಕರಣ ಉಪ ಅಭಿಯಾನ<br>7. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ<br>8. ಸಮಗ್ರ ತೋಟಗಾರಿಕಾ ಅಭಿವೃದ್ಧಿ<br>9. ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆ<br>10. ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013 ರಡಿ ಬಳಕೆಯಾಗದೆ ಇರುವ ಮೊತ್ತ<br>11. ಮಧುವನ ಮತ್ತು ಜೇನು ಸಾಕಾಣೆ ಅಭಿವೃದ್ಧಿ<br>12. ಜೇನು ಸಾಕಾಣೆ ಅಭಿವೃದ್ಧಿ<br>**ಈ ಯೋಜನೆಗಳ ಅನುಷ್ಠಾನದ ವಿವರ ಈ ಕೆಳಗಿನಂತಿದೆ.**<br>• ಫಲಾನುಭವಿಯು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು. ಜಂಟಿ ಖಾತೆಯಾಗಿದ್ದಲ್ಲಿ ಇತರೆ ಖಾತೆದಾರರ ಒಪ್ಪಿಗೆ ಪತ್ರ ಪಡೆದಿರಬೇಕು. ತಂದೆ ಅಥವಾ ತಾಯಿ ಹೆಸರಿನಲ್ಲಿ ಜಮೀನಿದ್ದು, ಅವರು ಮರಣ ಹೊಂದಿದ್ದಲ್ಲಿ ಮಾತ್ರ ಗ್ರಾಮ ಲೆಕ್ಕಾಧಿಕಾರಿಯಿಂದ ದೃಢೀಕರಿಸಿ, ಕುಟುಂಬದ ಇತರೆ ಸದಸ್ಯರಿಂದ ಒಪ್ಪಿಗೆ ಪಡೆಯುವುದು. |

| | | |
|---|---|---|
| | | FRUITS/HASIRU ತಂತ್ರಾಂಶದ ಮೂಲಕ ಅರ್ಜಿ ಪಡೆದು, ಅರ್ಹ ಅರ್ಜಿದಾರರ ಹೆಸರುಗಳನ್ನು ಜೇಷ್ಠತಾ ವಹಿಯಲ್ಲಿ ನಿರ್ವಹಿಸಿ ಜೇಷ್ಠತೆಯ ಆಧಾರದ ಮೇಲೆ ಸಹಾಯಧನಕ್ಕೆ ಪರಿಗಣಿಸಲಾಗುವುದು<br>• ಕಾರ್ಯಾದೇಶ (work order) ನೀಡಿದ ನಂತರ ನಿಗದಿತ ಕಾಲಮಿತಿಯೊಳಗೆ ಕೆಲಸವನ್ನು ಪೂರ್ಣಗೊಳಿಸಿದ್ದಲ್ಲಿ ಸಹಾಯಧನವನ್ನು ಒದಗಿಸಲಾಗುವುದು.<br>• ರೈತ ಫಲಾನುಭವಿಯು ಪರಿಶಿಷ್ಟ ಜಾತಿ (SC) ಮತ್ತು ಪರಿಶಿಷ್ಟ ಪಂಗಡ (ST)ಕ್ಕೆ ಸೇರಿದವರಾದಲ್ಲಿ ನಿಗಧಿತ ದಾಖಲಾತಿಗಳೊಂದಿಗೆ ಜಾತಿ ಪ್ರಮಾಣ ಪತ್ರವನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ<br>• ಈ ಹಿಂದೆ ಇಲಾಖೆಯಿಂದ ಯಾವುದೇ ಸಹಾಯಧನ ಪಡೆಯದ ಹೊಸ ಫಲಾನುಭವಿಗಳಿಗೆ ಹಾಗೂ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಆದ್ಯತೆ ನೀಡಲಾಗುವುದು.<br>ಮೇಲ್ಕಂಡ ಮಾನದಂಡಗಳನ್ನು ಪೂರೈಸಿದ ರೈತರಿಗೆ ಸಹಾಯಧನ ಒದಗಿಸಲಾಗುವುದು. |
| ಆ) | ಮಲೆನಾಡು ಭಾಗಗಳಲ್ಲಿ ಅಡಿಕೆ ಬೆಳೆಗೆ ಹಳದಿ ರೋಗ ಬರುತ್ತಿದ್ದು, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | **ಮಲೆನಾಡು ಭಾಗಗಳಲ್ಲಿ ಅಡಿಕೆ ಬೆಳೆಗೆ ಹಳದಿ ರೋಗವನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ಈ ಕೆಳಕಂಡಂತಿವೆ:**<br>1. 2023-24 ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳು ಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11952 ರಿಂದ ರೂ.123483 ರವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದ್ದು, 811.11 ಹೆಕ್ಟೇರ್ ಪ್ರದೇಶದ ನಿರ್ವಹಣೆಗೆ 731 ಫಲಾನುಭವಿಗಳಿಗೆ ರೂ. 149.332 ಲಕ್ಷ ಸಹಾಯಧನ ನೀಡಲಾಗಿರುತ್ತದೆ.<br>2. 2022-23 ನೇ ಸಾಲಿನಲ್ಲಿ ಅಡಿಕೆ ಹಳದಿ ಎಲೆ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, |

| | | |
|---|---|---|
| | | ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನ ಒದಗಿಸಿದ್ದು, ಸಂಶೋಧನೆ ಪ್ರಗತಿಯಲ್ಲಿರುತ್ತದೆ.<br>3. ಅಡಿಕೆ ಮರಗಳಲ್ಲಿ ಸಸ್ಯ ಸಂರಕ್ಷಣಾ ಔಷಧಿ ಸಿಂಪಡಣೆಗೆ ಅನುವು ಆಗುವಂತೆ ತೋಟಗಾರಿಕೆಯಲ್ಲಿ ಯಾಂತ್ರೀಕರಣ (SMAM) ಹಾಗೂ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ವಿನೂತನ ತಂತ್ರಜ್ಞಾನ ಮತ್ತು ಯಂತ್ರೋಪಕರಣಗಳಿಗೆ ಸಹಾಯಧನ ಕಾರ್ಯಕ್ರಮದಡಿ ಕಾರ್ಬನ್ ಫೈಬರ್ ದೋಟಿ ಖರೀದಿಸಲು ಸಾಮಾನ್ಯ ವರ್ಗದ ರೈತರಿಗೆ ಶೇಕಡಾ 40 ರಂತೆ ರೂ.40,000/- ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇಕಡಾ 50 ರಂತೆ ರೂ.50,000/- ಸಹಾಯಧನ ನೀಡಲಾಗುತ್ತಿದೆ.<br>4. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ ಉಪ ಕಾರ್ಯಕ್ರಮವಾದ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆ ಘಟಕದಡಿ ಅಂದಾಜು ವೆಚ್ಚ ರೂ.4000 ಗಳಾಗಿದ್ದು, ಇದರಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1200 ರಂತೆ 4 ಹೆಕ್ಟೇರ್ ವರೆಗೆ ಸಹಾಯಧನ ನೀಡಲಾಗುತ್ತಿದೆ.<br>5. ಅಡಿಕೆ ಹಳದಿ ಎಲೆ ಹಾಗೂ ಎಲೆಚುಕ್ಕೆ ರೋಗದ ನಿಯಂತ್ರಣೆ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಂದ ರೂ. 7.75 ಕೋಟಿಗಳಿಗೆ ಪ್ರಸ್ತಾವನೆ ಪಡೆದು RIDF ಅಡಿಯಲ್ಲಿ ಅನುದಾನ ಕೋರಿ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ.<br>6. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. |

| | | |
|---|---|---|
| ಇ) | ತೋಟಗಾರಿಕೆ ಇಲಾಖೆಯಿಂದ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ಶ್ರೀಗಂಧ ಕೃಷಿಗೆ ಯಾವ ಯಾವ ರೀತಿಯ ಸಹಾಯಧನವನ್ನು ಸರ್ಕಾರ ನೀಡುತ್ತಿದೆ: ರೈತರು ಶ್ರೀಗಂಧ ಕೃಷಿಯನ್ನು ಮಾಡಲು ಇರುವ ಷರತ್ತು, ನಿಬಂಧನೆಗಳು ಯಾವುವು; ಶ್ರೀಗಂಧ ಗಿಡಗಳಿಗೆ ಸರ್ಕಾರದಿಂದ ನಿಗದಿಪಡಿಸಿರುವ ಬೆಲೆ ಎಷ್ಟು ಮತ್ತು ಎಲ್ಲೆಲ್ಲಿ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ: (ಸಂಪೂರ್ಣ ಮಾಹಿತಿ ನೀಡುವುದು) | ಅರಣ್ಯ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಸಾರ್ವಜನಿಕ ವಿತರಣೆಗಾಗಿ ಸಸಿಗಳನ್ನು ಬೆಳೆಸುವ ಕಾರ್ಯಕ್ರಮದಡಿ ಶ್ರೀಗಂಧವು ಸೇರಿದಂತೆ ವಿವಿಧ ಜಾತಿಯ ಸಸಿಗಳನ್ನು ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತದೆ. ಸದರಿ ಸಸಿಗಳನ್ನು ಪಡೆದು, ಒಂದು ವೇಳೆ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆಯಡಿ ನೋಂದಾಯಸಿಕೊಂಡಲ್ಲಿ ಅಂತಹ ರೈತರಿಗೆ ಅವರು ಜಮೀನಿನಲ್ಲಿ ನೆಟ್ಟು ಬದುಕುಳಿದ ಪ್ರತಿ ಸಸಿಗೆ ಮೂರು ವರ್ಷಗಳಲ್ಲಿ ರೂ.125/- ರಂತೆ ಪ್ರೋತ್ಸಾಹ ಧನ ನಿಯಮಾನುಸಾರ (1ನೇ ವರ್ಷ ರೂ.35/-, 2ನೇ ವರ್ಷ ರೂ.40/- ಮತ್ತು 3ನೇ ವರ್ಷ ರೂ.50/-) ನೀಡಲಾಗುತ್ತದೆ.<br>ಪ್ರಸ್ತುತ ರೈತರು ಶ್ರೀಗಂಧ ಸಸಿಗಳನ್ನು ಬೆಳೆಸಲು ಯಾವುದೇ ಷರತ್ತು, ನಿಬಂಧನೆಗಳು ಇರುವುದಿಲ್ಲ.<br>2024-25ನೇ ಸಾಲಿನಲ್ಲಿ ಪ್ರತಿ ಶ್ರೀಗಂಧದ ಸಸಿಗೆ ರೂ.31.20ಗಳಷ್ಟು ವೆಚ್ಚವಾಗುತ್ತದೆ. ಆದರೆ, ಶ್ರೀಗಂಧದ ಸಸಿಗಳನ್ನು ರೈತರಿಗೆ ಚಾಲ್ತಿಯಲ್ಲಿರುವ ಸರ್ಕಾರದ ಆದೇಶದಂತೆ 8"X12" ಅಳತೆಯ ಪ್ರತಿ ಸಸಿಯನ್ನು ರಿಯಾಯಿತಿ ದರ ರೂ.6/-ರಂತೆ ಮಾರಾಟ ಮಾಡಲಾಗುತ್ತಿದೆ.<br>ಅರಣ್ಯ ಇಲಾಖೆಯ ಎಲ್ಲಾ ಸಸ್ಯಕ್ಷೇತ್ರಗಳಲ್ಲಿ ಶ್ರೀಗಂಧ ಸಸಿಗಳನ್ನು ನಿಯಮನುಸಾರ ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ. |
| ಈ) | ತೋಟಗಾರಿಕೆ ಇಲಾಖೆಯ ಹನಿ ನೀರಾವರಿ ಅಳವಡಿಕೆ ಮಂಜೂರಾತಿ ಪ್ರಕ್ರಿಯೆಯು ಈಗ ಯಾವ ಹಂತದಲ್ಲಿದೆ; ಹನಿ ನೀರಾವರಿ ಅಳವಡಿಕೆಗೆ ಮಂಜೂರು ಮಾಡಲು ಇರುವ ಮಾನದಂಡಗಳಾವುವು? (ಸಂಪೂರ್ಣ ವಿವರದೊಂದಿಗೆ ಮಾಹಿತಿ ನೀಡುವುದು) | 2024-25ನೇ ಸಾಲಿನ ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಪ್ರತಿ ಹನಿಗೆ ಅಧಿಕ ಬೆಳೆ ಕಾರ್ಯಕ್ರಮದಡಿ ಹನಿ/ ತುಂತುರು ನೀರಾವರಿ ಘಟಕ ಅಳವಡಿಸಲು ಅರ್ಜಿಗಳನ್ನು ಪಡೆದು ಕಾರ್ಯಾದೇಶಗಳನ್ನು ನೀಡಲಾಗುತ್ತಿದೆ.<br>**ರೈತರಿಗೆ ಹನಿ/ತುಂತುರು ನೀರಾವರಿ ಅಳವಡಿಕೆ ಮಂಜೂರು ಮಾಡಲು ನಿಗದಿಪಡಿಸಿರುವ ಮಾನದಂಡಗಳು ಕೆಳಕಂಡಂತಿದೆ.**<br>1. ಫಲಾನುಭವಿಗಳು ರೈತರಾಗಿದ್ದು, ಜಮೀನು ಅವರ ಹೆಸರಿನಲ್ಲಿರಬೇಕು ಹಾಗೂ |

| | | |
|---|---|---|
| | | ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ರೈತರಾಗಿರಬೇಕು ಅಥವ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಉದ್ದೇಶಿಸಿರಬೇಕು.<br>2. ರೈತರು FRUITS ತಂತ್ರಾಂಶದಲ್ಲಿ ಕಡ್ಡಾಯವಾಗಿ ನೊಂದಣಿಯಾಗಿರಬೇಕು ಮತ್ತು ತೋಟಗಾರಿಕೆ ಇಲಾಖೆಯಲ್ಲಿ ನಿರ್ವಹಿಸುತ್ತಿರುವ ಹಸಿರು ತಂತ್ರಾಂಶದ ಮೂಲಕ ಅರ್ಜಿ ಸಲ್ಲಿಸಬೇಕು.<br>3. ರೈತರ ತಾಕಿನಲ್ಲಿ ನೀರಾವರಿ ಸೌಲಭ್ಯದ ಮೂಲ ಇರಬೇಕು ಹಾಗೂ ಹನಿ/ತುಂತುರು ನೀರಾವರಿಗೆ ಯೋಗ್ಯವಿರುವಂತಹ ನೀರನ್ನು ಹೊಂದಿರಬೇಕು.<br>4. ಹನಿ/ತುಂತುರು ನೀರಾವರಿ ಘಟಕಗಳು ಕಾರ್ಯನಿರ್ವಹಿಸಲು ಅವಶ್ಯವಿರುವ ವಿದುಚ್ಛಕ್ತಿ ಅಥವಾ ಇತರೆ ಶಕ್ತಿ ಮೂಲಗಳನ್ನು ಹೊಂದಿರಬೇಕು.<br>5. ತನ್ನ ಸ್ವಂತ ನೀರಾವರಿ ಮೂಲ ಇಲ್ಲದಿದ್ದಲ್ಲಿ ಬೇರೆ ರೈತರಿಂದ ಈ ಸಂಬಂಧ ಒಪ್ಪಿಗೆ ಪತ್ರ ಪಡೆದು ಸಲ್ಲಿಸಬೇಕು.<br>6. ಪರಿಶಿಷ್ಟ ಜಾತಿ ಹಾಗು ಪರಿಶಿಷ್ಟ ಪಂಗಡದ ರೈತರಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರ ಸಲ್ಲಿಸಬೇಕು.<br>7. ಪ್ರತಿ ಫಲಾನುಭವಿಗೆ 5 ಹೆಕ್ಟೇರ್ ಪ್ರದೇಶದವರೆಗೆ ಸಹಾಯಧನ ನೀಡಲಾಗುತ್ತಿದೆ.<br>ತೋಟಗಾರಿಕೆ ಇಲಾಖೆಯಲ್ಲಿ ನೊಂದಾಯಿಸಿಕೊಂಡಿರುವ ಕಂಪನಿಗಳಿಂದ ಹನಿ ನೀರಾವರಿ ಘಟಕಗಳನ್ನು ರೈತರು ಅಳವಡಿಸಿಕೊಳ್ಳಬೇಕು. ಕಾಫಿ, ಟೀ ಹಾಗು ರಬ್ಬರ್ ಹೊರತುಪಡಿಸಿ ಉಳಿದ ತೋಟಗಾರಿಕೆ ಬೆಳೆಗೆ ಸಹಾಯಧನ ಲಭ್ಯವಿರುತ್ತದೆ. |

HORTI 325 HGM 2024

S. S. -[signature]

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು